ದಿನಾಂಕ 05.06.2026 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾದ ಪ್ರಮಾಣವಚನವನ್ನು ಭೋಧಿಸಲಾಯಿತು.

ಮುಖ್ಯ ವಿಚಾರಣೆ : ಮೇಲ್ಮನವಿದಾರರ ಪರ ಶ್ರೀ. ಆರ್ ಪಿ ವಕೀಲರಿಂದಃ

ಈ ಪ್ರಕರಣದಲ್ಲಿ ನಾನು ಮೇಲ್ಮನವಿದಾರರಾಗಿದ್ದು, ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಹೇಳಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ಅದರಲ್ಲಿರುವ ಅಂಶಗಳು ಮತ್ತು ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಯಾವುದೇ ದಾಖಲಾತಿಗಳನ್ನು ಗುರುತಿಸಿಕೊಂಡಿರುವುದಿಲ್ಲ.

ಪಾಟೀ ಸವಾಲು : ಎದುರುದಾರರ ಪರ ಶ್ರೀ. ಎಲ್ ಎ ವಕೀಲರಿಂದಃ

ವಿಚಾರಣಾ ನ್ಯಾಯಾಲಯದಲ್ಲಿ 2019 ರಲ್ಲಿ ಪ್ರಕರಣ ದಾಖಲು ಮಾಡಿದ್ದು ಸುಮಾರು 4 ವರ್ಷ ನಡೆದಿದೆ ಎಂದರೇ ಹೌದು. ಆ ದಾವೆಯಲ್ಲಿ ನಾನು 7 ದಾಖಲೆಗಳನ್ನು ಹಾಜರುಪಡಿಸಿದ್ದೇನೆ ಎಂದರೇ ಎಲ್ಲಾ ದಾಖಲೆಗಳನ್ನು ಕೊಟ್ಟಿರುವುದಿಲ್ಲ. ಸಾಕ್ಷಿ ವಿಚಾರಣೆ ಮಾಡಿ ಮುಂದಿನ ವಿಚಾರಣೆಗಾಗಿ ಸಾಕಷ್ಟು ಕಾಲಾವಕಾಶ ತೆಗೆದುಕೊಂಡಿದ್ದೀರಿ ಎಂದರೇ ಗೊತ್ತಿಲ್ಲ. ವಿಚಾರಣೆ ನ್ಯಾಯಾಲಯದಲ್ಲಿ ಸಾಕಷ್ಟು ಕಾಲಾವಕಾಶ ನೀಡಿದ್ದರು ಸಹ ಅವಕಾಶವನ್ನು ಉಪಯೋಗಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಆ ದಾವೆಯಲ್ಲಿ ನ್ಯಾಯಾಲಯ ರಚಿಸಿದ ವಿವದಾಂಶಗಳನ್ನು ತಿಳಿದುಕೊಂಡಿದ್ದೀರಿ ಎಂದರೇ ಇಲ್ಲ. ಆ ದಾವೆಯು ಮೂಲ್ಯದ ಆಧಾರದ ಮೇಲೆ ವಜಾ ಆಗಿದೆ ಎಂದರೇ ಸಾಕ್ಷಿ ವಕೀಲರು ಯಾವ ಯಾವ ದಾಖಲೆಗಳನ್ನು ಕೊಡಬೇಕೆಂದು ಹೇಳಿರಲಿಲ್ಲ ಎಂದು ಹೇಳುತ್ತಾರೆ. ವಕೀಲರು ಸ್ಪಷ್ಟವಾಗಿ ಮಾಹಿತಿ ಕೊಟ್ಟಿದ್ದರು ಸಹ ಅವರಿಗೆ ಸ್ಪಂದಿಸದೆ ಅವರ ಮೇಲೆ ಆರೋಪ ಮಾಡುತಿತದ್ದೇನೆ ಎಂದರೇ ಸರಿಯಲ್ಲ. ಈ ನ್ಯಾಯಾಲಯದಲ್ಲಿ ಹಾಜರುಪಡಿಸಿರುವ ದಾಖಲೆಗಳನ್ನು ವಿಚಾರಣೆ ನ್ಯಾಯಾಲಯದಲ್ಲಿ ಹಾಜರುಪಡಿಸಿದ್ದು. ಹಾಜರು ಪಡಿಸಿದ್ದಾರೆ ವಿಚಾರಣಾ ನ್ಯಾಯಾಲಯ ಅದನ್ನು ಪರಿಗಣಿಸಿದಿಯಾ ಎಂದರೇ ಯಾವುದನ್ನು ಕೊಟ್ಟಿರುವುದಿಲ್ಲ ಎಂದು ಹೇಳುತ್ತಾರೆ. ಸುಮಾರು 4 ವರ್ಷಗಳ ಕಾಲ

ವಿಚಾರಣಾ ನ್ಯಾಯಾಲಯದಲ್ಲಿ ದಾವೆ ನಡೆದಿದ್ದು ಆ ಸಮಯದಲ್ಲಿ ಯಾವ ಯಾವ ದಾಖಲೆ ಬೇಕು ಎಂದು ನಮಗೆ ಗೊತ್ತಿತ್ತು ಎಂದರೇ ಇಲ್ಲ. ನಿಮಗೆ ಆದ ಅನಾರೋಗ್ಯದ ಬಗ್ಗೆ ಯಾವುದಾದರೂ ದಾಖಲೆ ಕೊಟ್ಟಿದ್ದೀರ ಎಂದರೆ ಇಲ್ಲ.

2. ಮೇಲ್ಮನವಿ ಸಲ್ಲಿಸಲು ಆದ ವಿಳಂಬಕ್ಕೆ ತಿಳಿಸಿರುವ ಕಾರಣ ಸುಳ್ಳು ಅದು ಸಮಂಜಷ ಅಲ್ಲ ಎಂದರೇ ಸರಿಯಲ್ಲ. ನಾವು ಹಾಜರುಪಡಿಸಿರುವ ದಾಖಲೆಗಳನ್ನು ವಿಚಾರಣಾ ನ್ಯಾಯಾಲಯದಲ್ಲೂ ಸಹ ಹಾಜರುಪಡಿಸಿದ್ದೆ ಎಂದರೇ ಇಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಕಾರಣಗಳು ಸರಿಯಲ್ಲ ಎಂದರೇ ಸರಿಯಲ್ಲ. ಸುಳ್ಳು ಸಾಕ್ಷಿ ಹೇಳುತ್ತಿದ್ದೆನೆ ಎಂದರೇ ಸರಿಯಲ್ಲ.
ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖದ ಮೇರೆಗೆ ಬೆರಳಚ್ಚು ಮಾಡಲಾಯಿತು.)

(ಸಾ.ಓ.ಹೇ.ಕೇ.ಸ.ಇ.ಎ.ಒ)

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಚನ್ನಪಟ್ಟಣ.

ಯಾವುದೇ ದಾಖಲಾತಿಗಳನ್ನು ಗುರುತಿಸಿಕೊಂಡಿರುವುದಿಲ್ಲ.

( ಎದುರುದಾರರು ಮಧ್ಯಂತರ ಅರ್ಜಿ ಒಂದಕ್ಕೆ ತಕರಾರು ಅರ್ಜಿ ಸಲ್ಲಿಸದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುವುದರಿಂದ ಮೂಂದೂಡಲಾಯಿತು.)

( ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿರುವುದರಿಂದ ಮೂಂದೂಡಲಾಯಿತು.)

( ಈ ಹಂತದಲ್ಲಿ ಪ್ರತಿವಾದಿಯ ವಿರುದ್ಧ ಏಕತರ್ಫಿಯ ಆದೇಶ ಮಾಡಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

( ಈ ಹಂತದಲ್ಲಿ ಪ್ರತಿವಾದಿ ಪ್ರತಿವಾದ ಪತ್ರವನ್ನು ಸಲ್ಲಿಸದ ಕಾರಣ ಹಾಗೂ ನ್ಯಾಯಾಲಯದ ಮುಂದೆ ಹಾಜರಾಗದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)